# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 19.08.2011**

## ***ಕೃಷ್ಣ ಜನ್ಮಾಷ್ಟಮಿ ದಿನದ ಪ್ರಯುಕ್ತ ಮಾಂಸ ಮಾರಾಟ ನಿಷೇಧ***

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ದಿನಾಂಕ: 22.08.2011ರ ಸೋಮವಾರ ***"ಕೃಷ್ಣ ಜನ್ಮಾಷ್ಟಮಿ"*** ದಿನದ ಪ್ರಯುಕ್ತ ಪ್ರಾಣಿಗಳ ವಧೆ ಮತ್ತು ಮಾಂಸ ಮಾರಾಟ ನಿಷೇಧಿಸಲಾಗಿದೆ ಎಂದು ಜಂಟಿ ನಿರ್ದೇಶಕರು (ಪಶುಪಾಲನೆ) ರವರು ತಿಳಿಸಿದ್ದಾರೆ.

**ಸಾರ್ವಜನಿಕ ಸಂಪರ್ಕಾಧಿಕಾರಿ**

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 19.08.2011**

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಬೊಮ್ಮನಹಳ್ಳಿ ವಲಯದ ಬಿಳೇಕಹಳ್ಳಿಯ ಸರ್ವೆ ನಂ.154/11 ರಲ್ಲಿ 2 ಎಕರೆ 37 ಗುಂಟೆ ಸರ್ಕಾರಕ್ಕೆ ಸೇರಿದ ಜಮೀನನ್ನು ಒತ್ತುವರಿ ಮಾಡಿಕೊಂಡು ಶಾಂತರಾಜು ಎಂಬುವರು ಹಲವಾರು ಕಟ್ಟಡಗಳನ್ನು ಮತ್ತು ಬಹು ಅಂತಸ್ತಿನ ವಾಣಿಜ್ಯ ಕಟ್ಟಡಗಳನ್ನು ನಿರ್ಮಿಸಿ, ಬ್ಯಾಂಕ್, ಕಾಫಿ ಹೌಸ್ ಮತ್ತು ಇತರೆ ವ್ಯಾಪಾರ ಮುಗ್ಗಟ್ಟುಗಳಿಗೆ ನೀಡಿ, ಅದರಿಂದ ತಿಂಗಳಿಗೆ 6 ಲಕ್ಷ ರೂ.ಗಳನ್ನು ಬಾಡಿಗೆ ರೂಪದಲ್ಲಿ ಪಡೆಯುತ್ತಿದ್ದರು. ಈ ಜಮೀನಿನ ಮಾಲೀಕತ್ವ ಕುರಿತು ಕರ್ನಾಟಕ ಉಚ್ಛ ನ್ಯಾಯಾಲಯದಲ್ಲಿ ಕೇಸು ಬಹಳ ದಿನಗಳಿಂದ ವಿಲೇವಾರಿಯಾಗದೆ ಉಳಿದಿತ್ತು. ಇತ್ತೀಚೆಗೆ ನ್ಯಾಯಾಲಯ ತೀರ್ಪು ನೀಡಿ, ಇದು ಸರ್ಕಾರಿ ಜಮೀನು ಆಗಿದ್ದು, ಇದನ್ನು ಕೂಡಲೇ ವಶಪಡಿಸಿಕೊಳ್ಳಲು ಸೂಚಿಸಿರುವ ಹಿನ್ನೆಲೆಯಲ್ಲಿ ದಿನಾಂಕ: 18.08.2011 ರಂದು ಬೆಳಿಗ್ಗೆ 7.00 ಗಂಟೆಗೆ ಬೊಮ್ಮನಹಳ್ಳಿ ವಲಯದ ಅಧಿಕಾರಿಗಳು ಕಾರ್ಯಾಚರಣೆ ನಡೆಸಿ, ಕಟ್ಟಡ ತೆರವುಗೊಳಿಸುವ ಕಾರ್ಯಾಚರಣೆ ನಡೆಸಿತ್ತು. ಈ ಕಾರ್ಯಾಚರಣೆ ಇವತ್ತು ಕೂಡಾ ಮುಂದುವರೆದು ಸುಮಾರು 20 ಕ್ಕೂ ಹೆಚ್ಚು ಅಂಗಡಿಗಳನ್ನು ಒಡೆದು ಹಾಕಲಾಯಿತು.

ಈ ಕಾರ್ಯಾಚರಣೆಯನ್ನು ಬೊಮ್ಮನಹಳ್ಳಿ ವಲಯ ಜಂಟಿ ಆಯುಕ್ತರಾದ ಶ್ರೀ ಶಿವಬಸವಯ್ಯ, ಮುಖ್ಯ ಅಭಿಯಂತರರರು ಹಾಗೂ ಬಿ.ಎಂ.ಟಿ.ಎಫ್ ಸಿಬ್ಬಂದಿಯವರ ನೇತೃತ್ವದಲ್ಲಿ ನಡೆಸಲಾಯಿತು.

**ಸಾರ್ವಜನಿಕ ಸಂಪರ್ಕಾಧಿಕಾರಿ**